## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ ಇವರ ನಿಯಮ-330ಎ ಅಡಿಯಲ್ಲಿನ ಗಮನಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.

(ಕ್ರಮ ಸಂಖ್ಯೆ: 01/2023, ದಿನಾಂಕ: 19.07.2023)

**ವಿಷಯ:-**

ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಅರೆಕಾಲಿಕ ಉಪನ್ಯಾಸಕರುಗಳಿಗೆ 4 ತಿಂಗಳಿನಿಂದ ಬಾಕಿ ಇರುವ ವೇತನ ಬಿಡುಗಡೆ ಆಗದಿರುವ ವಿಷಯದ ಕುರಿತು.

**ಉತ್ತರ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ತಾತ್ಕಾಲಿಕವಾಗಿ ಪಡೆಯಲಾಗುತ್ತಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು 395 ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಒಟ್ಟು 1301 ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ (ಮಾರ್ಚ್) ಅಂತ್ಯದವರೆಗೆ ಪಡೆಯಲು ಸರ್ಕಾರವು ಅನುಮತಿ ನೀಡಲಾಗಿತ್ತು. ಅದರಂತೆ 2022-23ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ, ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸಿದ ಅವಧಿಗೆ 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ (ಮಾರ್ಚ್-2023) ಮಾತ್ರ ಅನುಮೋದನೆ ನೀಡಿ, ಭತ್ಯೆ ಮಂಜೂರಾತಿ ನೀಡಲಾಗಿರುತ್ತದೆ.

2023-24ನೇ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲು ಆರ್ಥಿಕ ಇಲಾಖೆಯ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಸದರಿ ಇಲಾಖೆಯು ನೇಮಕಾತಿಯ ಕಾರ್ಯವಿಧಾನ, ಉಂಟಾಗುವ ಆರ್ಥಿಕ ಪರಿಣಾಮ ಹಾಗೂ ಇತರೆ ಕೆಲವು ಅಂಶಗಳಿಗೆ ಮಾಹಿತಿ ನೀಡುವಂತೆ ತಿಳಿಸಿದ್ದು, ಸದರಿ ಮಾಹಿತಿಯನ್ನು ಆರ್ಥಿಕ ಇಲಾಖೆಗೆ ಒದಗಿಸಿ ಏಪ್ರಿಲ್ 2023ರ ನಂತರ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಡಿ 80 ಹೆಚ್‌ಪಿಟಿ 2023)

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು.